All India Radio: Bangalore
National Bulletin In Kannada
20.08.2024 07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
***************

ಮುಖ್ಯಾಂಶಗಳು

- ಪ್ರಧಾನಮಂತ್ರಿ ನರೇಂದ್ರ ಮೋದಿ ಮತ್ತು ಮಲೇಷ್ಯಾ ಪ್ರಧಾನಿ ಅನ್ವರ್ ಹಿಬ್ರಾಹಿಂ ದ್ವಿಪಕ್ಷೀಯ ಮಾತುಕತೆ ಇಂದು
- ಜಮ್ಮು ಮತ್ತು ಕಾಶ್ಮೀರ ವಿಧಾನಸಭೆಯ ಮೊದಲ ಹಂತದ ಮತದಾನಕ್ಕೆ ಇಂದು ಅಧಿಸೂಚನೆ ಜಾರಿ
- ಕೊಲ್ಕತ್ತಾ ವೈದ್ಯ ವಿದ್ಯಾರ್ಥಿನಿ ಹತ್ಯೆ ಪ್ರಕರಣ; ಸುಪ್ರೀಂಕೋರ್ಟ್‌ನಿಂದ ಇಂದು ವಿಚಾರಣೆ
- ಪ್ಯಾರಿಸ್ ಪ್ಯಾರಾಒಲಿಂಪಿಕ್ಸ್‌ಗೆ ತೆರಳಲಿರುವ ಕ್ರೀಡಾಪಟುಗಳೊಂದಿಗೆ ಪ್ರಧಾನಮಂತ್ರಿ ಸಂವಾದ

***************

ಮಲೇಶಿಯಾ ಪ್ರಧಾನಿ ಡಾಟೋ ಸೆರಿ ಅನ್ವರ್ ಬಿನ್ ಇಬ್ರಾಹಿಂ ಅವರು ಇಂದಿನಿಂದ ಮೂರು ದಿನಗಳ ಭಾರತ ಪ್ರವಾಸ ಕೈಗೊಂಡಿದ್ದಾರೆ. ಮಲೇಶಿಯಾ ಪ್ರಧಾನಿಯಾಗಿ ಅನ್ವರ್ ಇಬ್ರಾಹಿಂ ಅವರ ಮೊದಲ ಭೇಟಿ ಇದಾಗಿದೆ.

ನಾಳೆ ಅವರು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ದ್ವಿಪಕ್ಷೀಯ ಚರ್ಚೆ ನಡೆಸಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಅವರ ಭೇಟಿಯ ಸಂದರ್ಭದಲ್ಲಿ ಅವರು ಅಧ್ಯಕ್ಷ ದ್ರೌಪದಿ ಮುರ್ಮು ಮತ್ತು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರನ್ನು ಭೇಟಿಯಾಗಲಿದ್ದಾರೆ.

ಭಾರತ ಮತ್ತು ಮಲೇಷ್ಯಾ ಬಲವಾದ ಐತಿಹಾಸಿಕ ಮತ್ತು ಸಾಮಾಜಿಕ-ಸಾಂಸ್ಕೃತಿಕ ಸಂಬಂಧವನ್ನು ಹೊಂದಿವೆ. 2015 ರಲ್ಲಿ ಪ್ರಧಾನಿ ನರೇಂದ್ರ ಮೋದಿಯವರ ಭೇಟಿಯ ಸಮಯದಲ್ಲಿ ಉಭಯ ರಾಷ್ಟ್ರಗಳ ನಡುವಿನ ದ್ವಿಪಕ್ಷೀಯ ಸಂಬಂಧವನ್ನು ವರ್ಧಿತ ಕಾರ್ಯತಂತ್ರದ ಪಾಲುದಾರಿಕೆಯ ಸ್ಥಾನಮಾನಕ್ಕೆ ಏರಿಸಲಾಗಿದೆ ಎಂದು ಸಚಿವಾಲಯ ಹೇಳಿದೆ.

ಪ್ರಧಾನಿ ಅನ್ವರ್ ಇಬ್ರಾಹಿಂ ಅವರ ಭೇಟಿಯು ಭವಿಷ್ಯಕ್ಕಾಗಿ ಬಹು-ವಲಯ ಸಹಕಾರ ಕಾರ್ಯಸೂಚಿಯನ್ನು ರೂಪಿಸುವ ಮೂಲಕ ಭಾರತ-ಮಲೇಷ್ಯಾ ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ಬಲಪಡಿಸಲು ದಾರಿ ಮಾಡಿಕೊಡುವ ನಿರೀಕ್ಷೆ ಹೊಂದಲಾಗಿದೆ.

***************

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಪೋಲೆಂಡ್ ಹಾಗೂ ಉಕ್ರೇನ್‌ಗಳಿಗೆ ಈ ತಿಂಗಳ 21 ರಿಂದ ಮೂರು ದಿನಗಳ ಕಾಲ ಭೇಟಿ ನೀಡಲಿದ್ದಾರೆ.

ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಕಾರ್ಯದರ್ಶಿ ತನ್‌ಮೆ ಲಾಲ್ ಈ ವಿಷಯ ತಿಳಿಸಿ, ಭಾರತದ ಪ್ರಧಾನಿಯೊಬ್ಬರು 45 ವರ್ಷಗಳ ಬಳಿಕ ಪೋಲೆಂಡ್‌ಗೆ ನೀಡುತ್ತಿರುವ ಭೇಟಿ ಇದಾಗಿದೆ. ಪ್ರಧಾನಮಂತ್ರಿ ಅವರಿಗೆ ವಾರ್ಸಾದಲ್ಲಿ ಸಾಂಪ್ರದಾಯಿಕ ಸ್ವಾಗತ ನೀಡಲಾಗುತ್ತಿದೆ. ಮೋದಿ ಅವರು ಪೋಲೆಂಡಿನ ಪ್ರಧಾನಿ ಡೋನಾಲ್ಡ್ ಟೆಸ್ಕ್ ಅವರೊಂದಿಗೆ ಮಾತುಕತೆ ನಡೆಸಲಿದ್ದು, ಅಲ್ಲಿನ ಅಧ್ಯಕ್ಷ ಆಂಡ್ರೆ ಝುಜ್ ದುಡಾ ಅವರನ್ನು ಭೇಟಿ ಮಾಡಲಿದ್ದಾರೆ. ಇದಲ್ಲದೇ, ಭಾರತೀಯ ಸಮುದಾಯ ಹಾಗೂ ವ್ಯಾಪಾರಿ ನಾಯಕರೊಂದಿಗೆ ವಾರ್ಸಾದಲ್ಲಿ ಸಂವಾದ ನಡೆಸುವರು.

ಉಕ್ರೇನಿನ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಅವರ ಆಹ್ವಾನದ ಮೇರೆಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ಉಕ್ರೇನಿಗೆ 23 ರಂದು ಭೇಟಿ ನೀಡಲಿದ್ದಾರೆ ಎಂದು ತನ್‌ಮೆ ಲಾಲ್ ತಿಳಿಸಿದರು.

***************

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ನವದೆಹಲಿಯಲ್ಲಿ ಸಾರ್ವಜನಿಕ ಕ್ಷೇತ್ರದ ಬ್ಯಾಂಕುಗಳ ಸಾಧನೆಗಳ ಪರಿಶೀಲನೆ ನಡೆಸಿದರು. ಹಣಕಾಸು ಸೇವೆ ವಿಭಾಗದ ಕಾರ್ಯದರ್ಶಿ ಡಾ.ವಿವೇಕ್ ಜೋಶಿ ಹಾಗೂ ಸಾರ್ವಜನಿಕ ಕ್ಷೇತ್ರದ ಬ್ಯಾಂಕುಗಳ ಕಾರ್ಯನಿರ್ವಹಣಾ ನಿರ್ದೇಶಕರು ಮತ್ತು ಮುಖ್ಯ ಕಾರ್ಯಕಾರಿ ಅಧಿಕಾರಿಗಳು ಸೇರಿದಂತೆ ಹಿರಿಯ ಅಧಿಕಾರಿಗಳು ಈ ಸಭೆಯಲ್ಲಿ ಪಾಲ್ಗೊಂಡಿದ್ದರು.

ಬ್ಯಾಂಕುಗಳ ಸುಸ್ಥಿರತೆ ತಿಳಿಸುವ– ಠೇವಣಿಯಲ್ಲಿ ಬೆಳವಣಿಗೆ, ಸಾಲ– ಠೇವಣಿ ಅನುಪಾತ, ಸಂಪತ್ತಿನ ಗುಣಮಟ್ಟ ಮೊದಲಾದ ಅಂಶಗಳ ಬಗ್ಗೆ ಹಣಕಾಸು ಸಚಿವರು ಪರಿಶೀಲನೆ ನಡೆಸಿದರು. ಪ್ರಧಾನಮಂತ್ರಿ ಆವಾಸ್ ಯೋಜನೆ, ಪ್ರಧಾನಮಂತ್ರಿ ಸೂರ್ಯ ಘರ್, ಪ್ರಧಾನಮಂತ್ರಿ ವಿಶ್ವಕರ್ಮ ಯೋಜನೆ ಮೊದಲಾದ ಕಾರ್ಯಕ್ರಮಗಳಲ್ಲಿ ಸಾರ್ವಜನಿಕ ಕ್ಷೇತ್ರದ ಬ್ಯಾಂಕುಗಳು ಮಾಡಿರುವ ಸಾಧನೆಯ ಮೌಲ್ಯೀಕರಣವನ್ನು ಸಚಿವೆ ನಿರ್ಮಲಾ ಸೀತಾರಾಮನ್ ಮಾಡಿದರು.

ಮೂರನೇ ಅವಧಿಯ ಮೋದಿ ಸರ್ಕಾರದಲ್ಲಿ ಹಣಕಾಸು ಖಾತೆಯನ್ನು ವಹಿಸಿಕೊಂಡ ನಂತರ ನಿರ್ಮಲಾ ಸೀತಾರಾಮನ್ ಅವರು ನಡೆಸಿಕೊಡುತ್ತಿರುವ ಮೊದಲ ಸಭೆ ಇದಾಗಿದೆ. ಹಣಕಾಸು ಸಚಿವರು, ಪ್ರಾದೇಶಿಕ ಗ್ರಾಮೀಣ ಬ್ಯಾಂಕುಗಳ ಸಾಧನೆಯ ಪರಿಶೀಲನೆಯನ್ನೂ ಕೂಡ ನಡೆಸಿದರು.

***************

ಜಮ್ಮು ಮತ್ತು ಕಾಶ್ಮೀರದ ವಿಧಾನಸಭೆಯ ಮೊದಲ ಹಂತದ ಚುನಾವಣೆಗಾಗಿ ಅಧಿಸೂಚನೆ ಇಂದು ಹೊರಬೀಳಲಿದೆ. ಅನಂತ್‌ನಾಗ್, ಶೋಪಿಯಾನ್, ಪುಲ್ವಾಮ್, ರಮ್‌ಬನ್, ಕಿಶ್ತವರ್ ಮತ್ತು ದೋಡಾ ಜಿಲ್ಲೆಗಳ 24 ವಿಧಾನಸಭಾ ಕ್ಷೇತ್ರಗಳಲ್ಲಿ ಈ ಹಂತದಲ್ಲಿ ಚುನಾವಣೆ ನಡೆಯಲಿದೆ.

ನಾಮಪತ್ರ ಸಲ್ಲಿಸಲು ಈ ತಿಂಗಳ 27 ಕೊನೆಯ ದಿನವಾಗಿದ್ದು, ಮರುದಿನ ನಾಮಪತ್ರ ಪರಿಶೀಲನೆ ನಡೆಯಲಿದೆ. ನಾಮಪತ್ರ ಹಿಂದೆತೆಗೆದುಕೊಳ್ಳಲು ಇದೇ 30 ಕೊನೆಯ ದಿನವಾಗಿದ್ದು, ಮುಂದಿನ ತಿಂಗಳ 18 ರಂದು ಮತದಾನ ನಡೆಯಲಿದೆ.

ಈ ಮಧ್ಯೆ, ಮುಂಬರುವ ವಿಧಾನಸಭಾ ಚುನಾವಣೆಗಾಗಿ ಈ ಕೇಂದ್ರಾಡಳಿತ ಪ್ರದೇಶದ ಅಂತಿಮ ಮತದಾರರ ಪಟ್ಟಿ ನಾಳೆ ಪ್ರಕಟವಾಗುವ ನಿರೀಕ್ಷೆ ಇದೆ. ಈ ಪ್ರದೇಶದಲ್ಲಿ ಕ್ಷೇತ್ರ ಪುನರ್ ವಿಂಗಡಣೆ ಮಾಡಿರುವ ಹಿನ್ನೆಲೆಯಲ್ಲಿ ಒಟ್ಟು ವಿಧಾನಸಭಾ ಕ್ಷೇತ್ರಗಳ ಸಂಖ್ಯೆ 83 ರಿಂದ 90ಕ್ಕೆ ಏರಿದೆ. ಈ ಪೈಕಿ 74 ಕ್ಷೇತ್ರಗಳು ಸಾಮಾನ್ಯ, 7 ಕ್ಷೇತ್ರಗಳು ಪರಿಶಿಷ್ಟ ಜಾತಿ, 9 ಕ್ಷೇತ್ರಗಳು ಬುಡಕಟ್ಟು ಜನಾಂಗಕ್ಕೆ ಮೀಸಲಾಗಿದೆ.

ಈ ಮಧ್ಯೆ, ಬಟೋಟೆ–ದೊಡಾ–ಕಿಶ್ತವರ್ ರಾಷ್ಟ್ರೀಯ ಹೆದ್ದಾರಿ ಹಾಗೂ ಜಮ್ಮು–ಶ್ರೀನಗರ ರಾಷ್ಟ್ರೀಯ ಹೆದ್ದಾರಿ ಮಾರ್ಗದುದ್ದಕ್ಕೂ ಭದ್ರತಾ ವ್ಯವಸ್ಥೆಗಳನ್ನು ತೀವ್ರಗೊಳಿಸಲಾಗಿದೆ. ಕೃತಕ ಬುದ್ಧಿಮತ್ತೆ ಆಧರಿತ ಮುಖಚಹರೆ ಗುರುತಿಸುವ ವ್ಯವಸ್ಥೆ, ಡ್ರೋಣ್ ಮತ್ತು ಸಿಸಿಟಿವಿ ನಿಯೋಜಿಸಲಾಗಿದೆ. ತಪಾಸಣೆ ಹಾಗೂ ರಾತ್ರಿ ಗಸ್ತು ವ್ಯವಸ್ಥೆಯನ್ನು ಹೆಚ್ಚಿಸಲಾಗಿದೆ.

***************

ಸಮಾಜಕ್ಕೆ ನಿಸ್ವಾರ್ಥ ಸೇವೆ ಸಲ್ಲಿಸುತ್ತಿರುವ ವೈದ್ಯರನ್ನು ರಕ್ಷಿಸುವ ಜವಾಬ್ದಾರಿ ರಾಜ್ಯ ಸರ್ಕಾರಗಳ ಮೇಲಿದೆ ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ.ಎಲ್.ಮುರುಗನ್ ಹೇಳಿದ್ದಾರೆ.

ಅವರು ಚೆನ್ನೈ ಆಕಾಶವಾಣಿಯಲ್ಲಿ ನಡೆದ ಮಾಧ್ಯಮ ಸಂವಾದದಲ್ಲಿ, ಕೋಲ್ಕತ್ತಾ ವೈದ್ಯ ವಿದ್ಯಾರ್ಥಿ ಹತ್ಯೆ ಘಟನೆಯನ್ನು ಉಲ್ಲೇಖಿಸಿ ಮಾತನಾಡಿ, ಕೇಂದ್ರ ಸರ್ಕಾರವು ನೀಡಿರುವ ಮಾರ್ಗಸೂಚಿಗಳ ಪ್ರಕಾರ ವೈದ್ಯರ ಭದ್ರತೆಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರಗಳು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸಲು ಬದ್ಧವಾಗಿದೆ ಎಂದು ಹೇಳಿದರು.

2047ರ ವೇಳೆಗೆ, ಭಾರತವು ಸೂಪರ್ ಪವರ್ ಆಗಿ ಹೊರ ಹೊಮ್ಮುವಂತೆ ಮಾಡಲು ಸರ್ಕಾರವು ತನ್ನ ಎಲ್ಲಾ ಚಟುವಟಿಕೆಗಳನ್ನು ಈ ದಿಕ್ಕಿನತ್ತ ಕೇಂದ್ರೀಕರಿಸುತ್ತಿದೆ ಎಂದು ಸಚಿವರು ಹೇಳಿದರು. ಡಿಎಂಕೆ ನೇತೃತ್ವದ ರಾಜ್ಯ ಸರ್ಕಾರವು ಕೇಂದ್ರ ಸರ್ಕಾರದ ಕಾರ್ಯಕ್ರಮಗಳನ್ನು ತಮ್ಮದೆಂದು ಪರಿಗಣಿಸುತ್ತಿದೆ ಎಂದು ಸಚಿವರು ಆರೋಪಿಸಿದರು. ಕೇಂದ್ರದಿಂದ 8 ಸಾವಿರ ಕೋಟಿ ರೂಪಾಯಿ ಮಂಜೂರಾಗಿದ್ದರೂ, ಡಿಎಂಕೆ ಸರ್ಕಾರವು ಸುಳ್ಳು ಚಿತ್ರಣವನ್ನು ಸೃಷ್ಟಿಸಿ ಕೇಂದ್ರ ಸರ್ಕಾರವು ಹಣ ಬಿಡುಗಡೆ ಮಾಡಿಲ್ಲವೆಂದು ಆರೋಪಿಸಿದೆ ಎಂದು ಹೇಳಿದರು.

ಸಚಿವ ಮುರುಗನ್ ಅವರು, ತಮ್ಮ ಸಚಿವ ಖಾತೆಯ ವಿವಿಧ ವಿಭಾಗಗಳ ಕಾರ್ಯ ಚಟುವಟಿಕೆಗಳ ಪರಿಶೀಲನೆ ನಡೆಸಿದರು.

***************

ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ.ಎಲ್.ಮುರುಗನ್ ಅವರು, ತಮ್ಮ ಸಚಿವಾಲಯದ ವಿವಿಧ ವಿಭಾಗಗಳ ಮುಖ್ಯಸ್ಥರೊಂದಿಗೆ ಚನ್ನೈನಲ್ಲಿ ಪರಿಶೀಲನಾ ಸಭೆ ನಡೆಸಿದರು.

ಸಚಿವಾಲಯದ ಕರ್ನಾಟಕ, ತಮಿಳುನಾಡು, ಕೇರಳ, ಆಂಧ್ರಪ್ರದೇಶ ಮತ್ತು ತೆಲಂಗಾಣ ರಾಜ್ಯಗಳ ಆಕಾಶವಾಣಿ, ದೂರದರ್ಶನ, ಪಿಐಬಿ ಮತ್ತು ಸಿಬಿಸಿಗಳ ಹಿರಿಯ ಅಧಿಕಾರಿಗಳು ಇದರಲ್ಲಿ ಪಾಲ್ಗೊಂಡಿದ್ದರು.

***************

ಕೊಲ್ಕೊತ್ತಾದ ವೈದ್ಯ ವಿದ್ಯಾರ್ಥಿನಿ ಮೇಲೆ ನಡೆಯಿತೆನ್ನಲಾದ ಲೈಂಗಿಕ ದೌರ್ಜನ್ಯ ಮತ್ತು ಹತ್ಯೆ ಪ್ರಕರಣವನ್ನು ಸುಪ್ರೀಂಕೋರ್ಟ್ ಇಂದು ವಿಚಾರಣೆಗೆ ಕೈಗೆತ್ತಿಕೊಳ್ಳಲಿದೆ.

ಸುಪ್ರೀಂಕೋರ್ಟ್ ಈ ಪ್ರಕರಣವನ್ನು ಸ್ವ–ಪ್ರೇರಣೆಯಿಂದ ವಿಚಾರಣೆಗೆ ಪರಿಗಣಿಸಿದ್ದು, ವರಿಷ್ಠ ನ್ಯಾಯಾಧೀಶ, ನ್ಯಾಯಮೂರ್ತಿ ಡಿ.ವೈ. ಚಂದ್ರಚೂಡ, ನ್ಯಾಯಮೂರ್ತಿ ಜೆಬಿ. ಪರ್ದಿವಾಲಾ ಹಾಗೂ ನ್ಯಾಯಮೂರ್ತಿ ಮನೋಜ್ ಮಿಶ್ರಾ ಅವರನ್ನೊಳಗೊಂಡ ಪೀಠ ಈ ಪ್ರಕರಣದ ವಿಚಾರಣೆ ನಡೆಸಲಿದೆ.

ಕೊಲ್ಕೊತ್ತಾದ ಆರ್.ಜಿ. ಕರ್ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ಸೆಮಿನಾರ್ ಹಾಲ್‌ನಲ್ಲಿ ಸ್ನಾತಕೋತ್ತರ ವೈದ್ಯವಿದ್ಯಾರ್ಥಿನಿ ಮೇಲೆ ನಡೆಯಿತೆನ್ನಲಾದ ಲೈಂಗಿಕ ದೌರ್ಜನ್ಯ ಹಾಗೂ ಹತ್ಯೆ ಪ್ರಕರಣ ಇದಾಗಿದೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಕೊಲ್ಕೊತ್ತಾ ಪೊಲೀಸರು ಓರ್ವ ಪೌರ ಸ್ವಯಂ–ಸೇವಕನನ್ನು ಬಂಧಿಸಿದ್ದಾರೆ. ಈ ಘಟನೆಗೆ ಕಾರಣರಾದವರ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿ ವೈದ್ಯರು ರಾಷ್ಟ್ರವ್ಯಾಪಿ ಪ್ರತಿಭಟನೆ ನಡೆಸಿದರು. ಆಗಸ್ಟ್ 13 ರಂದು ಕೊಲ್ಕೊತ್ತಾ ಹೈಕೋರ್ಟ್ ಈ ಪ್ರಕರಣದ ತನಿಖೆಯನ್ನು ಕೈಗೊಳ್ಳುವಂತೆ ಸಿಬಿಐಗೆ ನಿರ್ದೇಶನ ನೀಡಿತ್ತು.

ಈ ಮಧ್ಯೆ, ಕೇಂದ್ರೀಯ ತನಿಖಾ ದಳ, ಆರ್.ಜಿ.ಕರ್ ವೈದ್ಯಕೀಯ ಕಾಲೇಜು ಹಾಗೂ ಆಸ್ಪತ್ರೆಯ ಮಾಜಿ ಪ್ರಾಂಶುಪಾಲ ಸಂದೀಪ್ ಘೋಷ್ ಅವರನ್ನು ಕಳೆದ 4 ದಿನಗಳಿಂದ ವಿಚಾರಣೆಗೆ ಒಳಪಡಿಸಿದೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಷ್ಟ್ರ ರಾಜಧಾನಿ ನವದೆಹಲಿಯಲ್ಲಿ ರೆಸಿಡೆಂಟ್ ವೈದ್ಯರು ಹಾಗೂ ವೈದ್ಯ ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿದರು.

ಏಮ್ಸ್, ಸಫ್ದರ್ ಜಂಗ್ ಆಸ್ಪತ್ರೆ, ಮೌಲನಾ ಆಜಾದ್ ವೈದ್ಯಕೀಯ ಕಾಲೇಜು, ಉತ್ತರ ರೈಲ್ವೆಯ ಕೇಂದ್ರೀಯ ಆಸ್ಪತ್ರೆ ಹಾಗೂ ಇತರ ಸಂಸ್ಥೆಗಳ ವೈದ್ಯೆರು ನಿರ್ಮಾಣ ಭವನದ ಬಳಿ ಪ್ರತಿಭಟನೆ ನಡೆಸಿ ಈ ಪ್ರಕರಣದಲ್ಲಿ ನ್ಯಾಯ ಒದಗಿಸುವಂತೆ ಒತ್ತಾಯಿಸಿದರು. ಹಾಗೂ  ಆರೋಗ್ಯ ಸಿಬ್ಬಂದಿಯ ರಕ್ಷಣಾ ಕ್ರಮಗಳಿಗಾಗಿ ಆಗ್ರಹಿಸಿದರು.

ಕೊಲ್ಕತ್ತಾದಲ್ಲಿಯೂ ಆರ್.ಜಿ.ಕರ್ ವೈದ್ಯಕೀಯ ಕಾಲೇಜಿನ ವೈದ್ಯರು ಹಾಗೂ ಸಗೋರ್ ದತ್ತ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಗಳ ವೈದ್ಯರು ಹಾಗೂ ವಿದ್ಯಾರ್ಥಿಗಳು ಮತ್ತು ನರ್ಸಿಂಗ್ ವಿದ್ಯಾರ್ಥಿಗಳು ಕೂಡ ಪ್ರತಿಭಟನೆ ನಡೆಸಿದರು.

***************

ಭಾರತದ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್, ನೇಪಾಳದ ವಿದೇಶಾಂಗ ಸಚಿವ ಡಾ. ಅರ್ಜು ರಾಣಾ ದೇವ್ಬಾ ಅವರೊಂದಿಗೆ ನವದೆಹಲಿಯಲ್ಲಿ ಮಾತುಕತೆ ನಡೆಸಿದರು.

ಇಂಧನ, ವ್ಯಾಪಾರ, ಸಂಪರ್ಕ ಮತ್ತು ಮೂಲಸೌಕರ್ಯ ಅಭಿವೃದ್ಧಿ ಸೇರಿದಂತೆ ವಿವಿಧ ಕ್ಷೇತ್ರಗಳ ದ್ವಿಪಕ್ಷೀಯ ಸಹಕಾರದ ಬಗ್ಗೆ ಉಭಯ ನಾಯಕರು ವಿಚಾರ ವಿನಿಮಯ ಮಾಡಿದರು.

ನೇಪಾಳ ಭಾರತಕ್ಕೆ ಸುಮಾರು ಒಂದು ಸಾವಿರ ಮೆಗಾ ವ್ಯಾಟ್ ವಿದ್ಯುತ್‌ನ್ನು ರಫ್ತು ಮಾಡಲಿದೆ ಎಂದು ಡಾ.ಜೈಶಂಕರ್ ಸಭೆ ನಂತರ ಸಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದು, ಈ ಬಗ್ಗೆ ಹರ್ಷ ವ್ಯಕ್ತಪಡಿಸಿದ್ದಾರೆ.

ನಿನ್ನೆ ಆಗಮಿಸಿದ ನೇಪಾಳದ ವಿದೇಶಾಂಗ ಸಚಿವರು ತಮ್ಮ ಐದು ದಿನಗಳ ಭೇಟಿ ಸಂದರ್ಭದಲ್ಲಿ ವಿವಿಧ ಕಾರ್ಯಕ್ರಮಗಳಲ್ಲಿ ಪಾಲ್ಗೊಳ್ಳಲಿದ್ದಾರೆ.

ಇದು ಭಾರತ ಹಾಗೂ ನೇಪಾಳ ನಡುವಿನ ನಿಯಮಿತ ಉನ್ನತ ಮಟ್ಟದ ವಿಚಾರ ವಿನಿಮಯದ ಮಾತುಕತೆಯಾಗಿದೆ. ಭಾರತದ ನೆರೆ ಮೊದಲು ನೀತಿಯಂತೆ ನೇಪಾಳ ಆದ್ಯತೆಯ ಸಹಭಾಗಿತ್ವ ಹೊಂದಿದೆ. ಮಾತುಕತೆ ಸಂದರ್ಭದಲ್ಲಿ ದ್ವಿಪಕ್ಷೀಯ ಸಹಕಾರ ಒಪ್ಪಂಗಳ ಪರಿಶೀಲನೆ ನಡೆಯಲಿದೆ ಎಂದು ವಿದೇಶಾಂಗ ಸಚಿವಾಲಯದ ಹೇಳಿಕೆ ತಿಳಿಸಿದೆ.

***************

ಜಿಂಬಾಬ್ವೆ ಉಪಾಧ್ಯಕ್ಷ ಕಾನ್‌ಸ್ಟೆಂಟಿನೊ ಗುವೆಯಾ ಡೊಮಿನಿಕ್ ನೈಕಾಡ್‌ಝಿನೊ ಚಿವೆಂಗಾ ನವದೆಹಲಿಗೆ ಆಗಮಿಸಿದ್ದಾರೆ. ಇಂದು ನಡೆಯಲಿರುವ ಭಾರತ ಆಫ್ರಿಕಾ 19ನೇ ಸಿಐಐ ವ್ಯಾಪಾರ ಸಮಾವೇಶದಲ್ಲಿ ಅವರು ಪಾಲ್ಗೊಳ್ಳಲಿದ್ದಾರೆ.

ಈ ಸಮಾವೇಶದಲ್ಲಿ ಜಿಂಬಾಬ್ವೆ ಉಪಾಧ್ಯಕ್ಷರು ಭಾಗವಹಿಸುತ್ತಿರುವುದು ಉಭಯ ದೇಶಗಳ ನಡುವಿನ ಸದೃಢ ಸಂಬಂಧಗಳ ಪ್ರತೀಕವಾಗಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ತಿಳಿಸಿದ್ದಾರೆ.

***************

ಕರ್ನಾಟಕದಲ್ಲಿ ರಾಜ್ಯಪಾಲರು ಮೂಡಾ ಪ್ರಕರಣದಲ್ಲಿ ನೀಡಿರುವ ಪ್ರಾಸಿಕ್ಯೂಷನ್ ಅನುಮತಿಗೆ ತಡೆಯಾಜ್ಞೆ ನೀಡಬೇಕೆಂದು ಕೋರಿ ಮುಖ್ಯಮಂತ್ರಿ ಸಿದ್ಧರಾಮಯ್ಯ ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ಹೈಕೋರ್ಟ್ ಆಗಸ್ಟ್ 29ಕ್ಕೆ ವಿಚಾರಣೆ ಮುಂದೂಡಿದೆ. ಇದೇ ವೇಳೆ ಜನಪ್ರತಿನಿಧಿಗಳ ಕೋರ್ಟ್ ಯಾವುದೇ ವಿಚಾರಣೆ ಹಾಗೂ ಆದೇಶ ನೀಡದಂತೆ ಸೂಚಿಸಿದೆ. ಎಲ್ಲಾ ಪ್ರಕ್ರಿಯೆಗಳನ್ನು ಮುಂದೂಡುವಂತೆ ಸಂಬಂಧಪಟ್ಟ ಕೆಳ ನ್ಯಾಯಾಲಯಕ್ಕೆ ತಿಳಿಸಿದೆ.

ಶನಿವಾರ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದರು. ಇದನ್ನು ಪ್ರಶ್ನಿಸಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಹೈಕೋರ್ಟ್‌ಗೆ ರಿಟ್ ಅರ್ಜಿಯನ್ನು ಸಲ್ಲಿಸಿದ್ದರು.

********ಮುಕ್ತಾಯ*******